ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಸೇರಿಸಲಾಯಿತು)

ಪ್ರಸ್ತಾವ ಅಂಗೀಕಾರ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, " 2009ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಈ) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2009
ಪರ್ಯಾಲೋಚನಾ ಪ್ರಸ್ತಾವ

ಶ್ರೀ ಆರ್.ಅಶೋಕ್ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : " 2009ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 1 ರಿಂದ 2 ರವರೆಗೆ

ಅಧ್ಯಕ್ಷರು : "ಖಂಡ 1 ರಿಂದ 2 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 1 ರಿಂದ 2 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆದ ವಿಧೇಯಕ ಭಾಗವಾಗಿರುತ್ತದೆ.)

ಪ್ರಸ್ತಾವದ ಅಂಗೀಕಾರ

ಶ್ರೀ ಆರ್.ಅಶೋಕ್ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, " 2009ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ಸೂಚಿಸಲಾಯಿತು.

ಊ) ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ತಿದ್ದುಪಡಿ) ವಿಧೇಯಕ, 2009

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್. ಯರಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : " 2009ರ ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು